ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಅತಿವೃಷ್ಟಿಯಿಂದ ಉಂಟಾಗಿರುವ ಆಸ್ತಿ-ಪಾಸ್ತಿ ನಷ್ಟದ ಕುರಿತು

ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

211 (16) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ತಿಂಗಳುಗಳಿಂದ ಸುರಿದ ಭಾರಿ ಮಳೆಯಿಂದ ಜಿಲ್ಲೆಯಲ್ಲಿ ಅಪಾರ ಪ್ರಮಾಣದ ಆಸ್ತಿ-ಪಾಸ್ತಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಮನೆ ಕಳೆದುಕೊಂಡವರಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ, ಅವರುಗಳ ವಿಳಾಸದೊಂದಿಗೆ ಸಂಪೂರ್ಣ ಮಾಹಿತಿ ಹಾಗೂ ಪರಿಹಾರದ ಮೊತ್ತದ ವಿವರ ನೀಡುವುದು;

(ಈ) ಪರಿಹಾರ ನೀಡದೇ ಇರುವವರಿಗೆ ಯಾವ ಕಾಲ ಮಿತಿಯಲ್ಲಿ ಪರಿಹಾರ ನೀಡಲಾಗುವುದು; (ವಿವರ ನೀಡುವುದು)

(ಉ) ಯಾವ ಯಾವ ಮಾನದಂಡನೆಗಳನ್ನು ಆಧರಿಸಿ ಪರಿಹಾರ ನೀಡಲಾಗಿದೆ? (ವಿವರ ನೀಡುವುದು)